**1ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಚಾಮರಾಜನಗರ,**
**ಪೀಠಾಸೀನ ಕೊಳ್ಳೇಗಾಲ**

**ಎಸ್.ಸಿ. 5005/2026**

| | | | |
|---|---|---|---|
| **ಸಾಕ್ಷಿದಾರರ ಹೆಸರು** | : ಪುಂಡಲೀಕ ಚೌಹಾಣ | **ಪ್ರಮಾಣ ವಚನ ಭೋಧಿಸಿದ ದಿನಾಂಕ** | |
| **ತಂದೆ ಹೆಸರು** | : ಭೀಮಸಿಂಗ್ | **15.07.2026** | |
| **ವಯಸ್ಸು** | : 28 ವರ್ಷ | | |
| **ವೃತ್ತಿ** | : ಪೋಲೀಸ್ ಪೇದೆ, ಕೊಳ್ಳೇಗಾಲ ಗ್ರಾಮಾಂತರ | **ಫಿರ್ಯಾ.ಸಾಃ** | **10** |
| **ವಾಸ ಸ್ಥಳ** | : ಕೊಳ್ಳೇಗಾಲ | **ಚಾ.ಸಾಃ** | **09** |

**ಮುಖ್ಯ ವಿಚಾರಣೆಃ ಮಾನ್ಯ ಸರ್ಕಾರಿ ಅಭಿಯೋಜಕರಿಂದಃ-**

**ನಾನು 2021 ರಿಂದ ಪಿ.ಸಿ ಆಗಿ ಕೊಳ್ಳೇಗಾಲ ಗ್ರಾಮಾಂತರ ಪೊ.ಠಾಣೆಯಲ್ಲಿ ಕರ್ತವ್ಯ ನಿರ್ವಹಿಸಿರುತ್ತೇನೆ.**

ದಿಃ 16.06.2025 ರಂದು ಚಾಸಾ 13 ರವರೊಂದಿಗೆ ಈ ಪ್ರಕರಣದಲ್ಲಿ ಕೃತ್ಯ ನಡೆದ ಸ್ಥಳಕ್ಕೆ ತೆರಳಿದ್ದು, ಚಾಸಾ 13ರವರು ಮಹಜರ್ ಕ್ರಮ ಜರುಗಿಸಿರುತ್ತಾರೆ. ನಾನು ಆ ಸಮಯದಲ್ಲಿ ಭಾವಚಿತ್ರಗಳನ್ನು ತೆಗೆದಿರುತ್ತೇನೆ. ಆ ಸಮಯದಲ್ಲಿ ಚಾಸಾ 13 ರವರು ನ್ಯಾಯಾಲಯದ ಮುಂದೆ ಇರುವ ಮು.ಮಾ 1 ಮತ್ತು 2 ಅನ್ನು ಅಮಾನತ್ತುಪಡಿಸಿಕೊಂಡರು. ಭಾವಚಿತ್ರಗಳನ್ನು ಈಗಾಗಲೇ ನಿಪಿ 5 ಮತ್ತು 6 ಎಂದು ಗುರುತಿಸಲಾಗಿದೆ. ಭಾವಚಿತ್ರಗಳನ್ನು ತೆಗೆದ ಸಂಬಂಧ ನಾನು ಭಾರತೀಯ ಸಾಕ್ಷಿ ಅಧಿನಿಯಮ ಕಲಂ 63(4)(ಸಿ) ರೀತಿ ದೃಢಿಕರಣವನ್ನು ನೀಡಿರುತ್ತೇನೆ. ದೃಢಿಕರಣವನ್ನು ನಿಪಿ 12 ಎಂದು, ಸಾಕ್ಷಿ ಸಹಿಯನ್ನು ನಿಪಿ 12(ಎ) ಎಂದು

ಗುರುತಿಸಲಾಯಿತು. ಚಾಸಾ 13 ರವರ ಮೊಬೈಲ್ ಮೂಲಕ ಭಾವಚಿತ್ರಗಳನ್ನು ತೆಗೆದಿರುತ್ತೇನೆ.

**ಪಾಟೀ ಸವಾಲುಃ- ಶ್ರೀ ಬಿ.ಎಸ್.ಆರ್ ವಕೀಲರಿಂದ**

ನಾನು ಘಟನಾ ಸ್ಥಳಕ್ಕೆ ಹೋಗಿಲ್ಲ, ಚಾಸಾ 13 ರವರು ಮು.ಮಾ 1 ಮತ್ತು 2 ಅನ್ನು ಅಮಾನತ್ತುಪಡಿಸಿಕೊಂಡಿಲ್ಲ, ನಾನು ಯಾವುದೇ ಭಾವಚಿತ್ರಗಳನ್ನು ತೆಗದಿಲ್ಲ ಎಂದರೆ ಸರಿಯಲ್ಲ. ನಾನು ಸುಳ್ಳು ದೃಢಿಕರಣವನ್ನು ನೀಡಿ, ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆಃ ಇಲ್ಲ

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ ಎ ಒ

1 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಚಾಮರಾಜನಗರ, ಪೀಠಾಸೀನ ಕೊಳ್ಳೇಗಾಲ